. Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

09.08.2024 18.40 hrs

<><*<><>*><>

ಮುಖ್ಯಾಂಶಗಳು

- ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರದಿಂದ ಶೀಘ್ರದಲ್ಲೇ ಅನುದಾನ ಬಿಡುಗಡೆ
- ಬಿಜೆಪಿ- ಜೆಡಿಎಸ್‌ನಿಂದ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸುವ ಪ್ರಯತ್ನ - ಮುಖ್ಯಮಂತ್ರಿ ಆರೋಪ
- ನಾಳೆ ಮೈಸೂರಿನಲ್ಲಿ ಬಿಜೆಪಿ-ಜೆಡಿಎಸ್ ಬೃಹತ್ ಸಮಾವೇಶ
- ರಾಜ್ಯಾದ್ಯಂತ ಶ್ರದ್ಧಾ-ಭಕ್ತಿಯಿಂದ ನಾಗರಪಂಚಮಿ ಹಬ್ಬ ಆಚರಣೆ
- ಪ್ಯಾರಿಸ್ ಒಲಿಂಪಿಕ್ಸ್; ೫೭ ಕೆಜಿ ಫ್ರೀಸ್ಟೈಲ್ ಕುಸ್ತಿ ವಿಭಾಗದಲ್ಲಿ ಇಂದು ಕಂಚು ಪದಕಕ್ಕಾಗಿ ಭಾರತದ ಅಮನ್ ಸೆಹ್ರಾವತ್ ಸೆಣಸು

<><*<><>*><>

ಭದ್ರಾ ಮೇಲ್ದಂಡೆ ಯೋಜನೆಯಡಿ ತುಂಗಾ ಜಲಾಶಯದಿಂದ ಭದ್ರಾ ಜಲಾಶಯಕ್ಕೆ ನೀರು ಸರಬರಾಜು ಮಾಡುವ ಯೋಜನೆಯನ್ನು ಮಾರ್ಚ್ ೨೦೨೬ ರ ವೇಳೆಗೆ ಪೂರ್ಣಗೊಳಿಸುವುದಾಗಿ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್.ಪಾಟೀಲ್ ಭರವಸೆ ನೀಡಿದ್ದಾರೆ. ಲೋಕಸಭೆಯಲ್ಲಿ ದಾವಣಗೆರೆ ಸಂಸದರಾದ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರ ಚುಕ್ಕೆ ಗುರುತಿನ ಪ್ರಶ್ನೆಗೆ ಉತ್ತರಿಸಿದ ಕೇಂದ್ರ ಸಚಿವರು, ೨೦೨೪-೨೫ನೇ ಸಾಲಿನ ಬಜೆಟ್‌ನಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರದ ಮನವಿಯಂತೆ ಅನುದಾನವನ್ನು ಮೀಸಲಿರಿಸಿದ್ದು, ಶೀಘ್ರದಲ್ಲೇ ಅನುದಾನವನ್ನು ಬಿಡುಗಡೆಗೊಳಿಸಲಾಗುವುದು ಎಂದರು.

<><*<><>*><>

ರಾಜ್ಯದ ಜೆಡಿಎಸ್ ಹಾಗೂ ಬಿಜೆಪಿ ನಾಯಕರು ಕೇಂದ್ರ ಸರ್ಕಾರದೊಂದಿಗೆ ಕೈ ಜೋಡಿಸಿ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸಲು ಪ್ರಯತ್ನಿಸುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ. ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿಂದು ನಡೆದ ಜನಾಂದೋಲನ ಸಮಾವೇಶದಲ್ಲಿ ಮಾತನಾಡಿದ ಅವರು, ಜನ ಬೆಂಬಲವಿರುವ ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ಮೈತ್ರಿ ಪಕ್ಷಗಳಿಂದ ಸಾಧ್ಯವಿಲ್ಲ. ಸಾರ್ವಜನಿಕರೇ ಪ್ರಜಾಪ್ರಭುತ್ವದ ಸೇನಾನಿಗಳಾಗಿದ್ದು, ಸಂವಿಧಾನ ಹಾಗೂ ಸಾಮಾಜಿಕ ನ್ಯಾಯದ ರಕ್ಷಣೆಗೆ ನಿಂತ ಜನತೆಗೆ ಧನ್ಯವಾದಗಳು ಎಂದರು. ತನ್ನ ೪೦ ವರ್ಷಗಳ ರಾಜಕೀಯ ಜೀವನದಲ್ಲಿ ಯಾವುದೇ ಕಪ್ಪುಚುಕ್ಕೆ ಇಲ್ಲ. ಆಸ್ತಿ ಮಾಡುವ ಹುನ್ನಾರ ನಡೆಸಿಲ್ಲ ಮತ್ತು ಯಾವುದೇ ರೀತಿಯ ಭ್ರಷ್ಟಾಚಾರದಲ್ಲಿ ತೊಡಗಿಲ್ಲ ಎಂದು ಮುಖ್ಯಮಂತ್ರಿಯವರು ಹೇಳಿದರು. ಬಳಿಕ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಜೆಡಿಎಸ್ ಬಿಜೆಪಿ ಪಕ್ಷಗಳು ಕ್ಷುಲ್ಲಕ ಕಾರಣಕ್ಕಾಗಿ ಪಾದಯಾತ್ರೆ ಮಾಡುತ್ತಿದ್ದು, ಯಾವುದೇ ದಾಖಲೆಗಳಿಲ್ಲದೆ ವ್ಯರ್ಥ ಹೋರಾಟ ನಡೆಸುತ್ತಿವೆ ಎಂದು ಹೇಳಿದರು. ಜೆಡಿಎಸ್ ಪಕ್ಷದ ನಾಯಕರುಗಳು ನಿವೇಶನ ಪಡೆದಿರುವ ಬಗ್ಗೆ ಬಿಜೆಪಿ ಪಕ್ಷ ಪಟ್ಟಿ ಬಿಡುಗಡೆಗೊಳಿಸಿತ್ತು, ಆದರೂ ಜೆಡಿಎಸ್ ಪಕ್ಷ ಉತ್ತರ ನೀಡದೆ ಬಿಜೆಪಿಯೊಂದಿಗೆ ಕೈಜೋಡಿಸಿ ಪಾದಯಾತ್ರೆ ನಡೆಸುತ್ತಿದ್ದಾರೆ ಎಂದು ತಿಳಿಸಿದರು. ಉಪಮುಖ್ಯಮಂತ್ರಿ ಡಿ.ಕೆ.ಶಿಮಕುಮಾರ್ ಮಾತನಾಡಿ, ತಮ್ಮದು ಸತ್ಯದ ಪರವಾದ ಹೋರಾಟವಾಗಿದ್ದು, ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಇತಿಹಾಸ ಕಾಂಗ್ರೆಸ್ ಪಕ್ಷಕ್ಕಿದೆ. ಜನಾಂದೋಲನ ಕಾರ್ಯಕ್ರಮವು ಜನರ ರಕ್ಷಣೆಗಾಗಿ ನಡೆಯುತ್ತಿದೆ. ೧೩೬ ಶಾಸಕರ ಬೆಂಬಲ ಸಿದ್ದರಾಮಯ್ಯ

ಅವರ ಪರವಿದೆ. ಹೀಗಾಗಿ ಬಿಜೆಪಿ - ಜೆಡಿಎಸ್ ಗೆ ರಾಜೀನಾಮೆ ಕೇಳುವ ಯಾವುದೇ ನೈತಿಕತೆ ಇಲ್ಲ ಎಂದು ಹೇಳಿದರು.

<><*<><>*><>

ವಿಧಾನಸಭೆಯಲ್ಲಿ ಪ್ರತಿಪಕ್ಷಗಳಿಗೆ ಮುಡಾ ಹಗರಣದ ಬಗ್ಗೆ ಮಾತನಾಡಲು ಅವಕಾಶ ನೀಡಿದ್ದರೆ, ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ಮಾಡುವ ಸನ್ನಿವೇಶವೇ ಉದ್ಭವವಾಗುತ್ತಿರಲಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದ್ದಾರೆ. ಮಂಡ್ಯದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸದನದಲ್ಲಿ ಈ ಹಗರಣದ ಬಗ್ಗೆ ಮಾತನಾಡಲು ಎಷ್ಟೇ ಅವಕಾಶ ಕೇಳಿದರೂ ಸರ್ಕಾರ ಕೊಡಲಿಲ್ಲ. ಆ ನಿಟ್ಟಿನಲ್ಲಿ ಜನರಿಗೆ ಈ ವಿಚಾರದ ಬಗ್ಗೆ ಮನದಟ್ಟು ಮಾಡಲು ಮೈಸೂರು ಚಲೋ ಪಾದಯಾತ್ರೆ ಹಮ್ಮಿಕೊಂಡಿದ್ದೇವೆ ಎಂದು ಅವರು ತಿಳಿಸಿದ್ದಾರೆ. ನಾಳೆ ಬೆಳಿಗ್ಗೆ ಮೈಸೂರಿನಲ್ಲಿ ಬೃಹತ್ ಸಮಾವೇಶವನ್ನು ಆಯೋಜಿಸಲಾಗಿದೆ ಎಂದು ಮಾಹಿತಿ ನೀಡಿದ ಅವರು, ಸರ್ಕಾರದ ಅವ್ಯವಹಾರಗಳನ್ನು ತಪ್ಪುಗಳನ್ನು ಜನರ ಮುಂದೆ ಇಟ್ಟು ದಾಖಲೆಗಳೊಂದಿಗೆ ವಿಧಾನಸಭೆಯಲ್ಲಿ ಸರ್ಕಾರವನ್ನು ಪ್ರಶ್ನಿಸುವುದು ವಿರೋಧ ಪಕ್ಷದ ಕರ್ತವ್ಯವಾಗಿದೆ ಎಂದು ಹೇಳಿದರು.

<><*<><>*><>

ಕೆಆರ್‌ಎಸ್ ಅಣೆಕಟ್ಟೆ ಭರ್ತಿಯಾಗಿ ತಮಿಳುನಾಡಿಗೆ ಹೆಚ್ಚುವರಿ ನೀರು ಹೋಗುತ್ತಿದ್ದು, ಅದನ್ನು ತಡೆಯುವ ನಿಟ್ಟಿನಲ್ಲಿ ಮಂಡ್ಯ ಜಿಲ್ಲೆ ಸೇರಿದಂತೆ ಕಾವೇರಿ ಜಲಾನಯನ ಪ್ರದೇಶದ ಕೆರೆಗಳನ್ನು ಭರ್ತಿ ಮಾಡಲು ಹಾಗೂ ಅಂತರ್ಜಲವನ್ನು ಹೆಚ್ಚಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆಯ ಕೃಷ್ಣರಾಜ ಸಾಗರ ಜಲಾಶಯವನ್ನು ವೀಕ್ಷಣೆ ನಡೆಸಿದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ವರ್ಷದ ವಾಡಿಕೆಯಂತೆ ತಮಿಳುನಾಡಿಗೆ ನೀರು ಹರಿಸಲಾಗುತ್ತಿದೆ. ಅದಾಗಿಯೂ ಹೆಚ್ಚಿನ ನೀರು ಹೋಗುತ್ತಿದ್ದು, ಅದನ್ನು ತಡೆಯಲು ನಮ್ಮ ಭಾಗದಲ್ಲಿ ಅಧಿಕಾರಿಗಳು ಅಂತರ್ಜಲ ಅಭಿವೃದ್ಧಿ ಮಾಡುವಂತೆ ಸೂಚನೆ ನೀಡಲಾಗಿದೆ ಎಂದು ಅವರು ಹೇಳಿದ್ದಾರೆ.

<><*<><>*><>

ಇಂದು ರಾಜ್ಯಾದ್ಯಂತ ನಾಗರಪಂಚಮಿ ಹಬ್ಬವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ. ಶ್ರಾವಣ ಮಾಸದ ಶುಕ್ಲ ಪಕ್ಷದ ೫ನೇ ದಿನದಂದು ಆಚರಿಸಲಾಗುವ ಈ ಹಬ್ಬದ ದಿನ ಶಿವನಿಗೆ ಹಾಗೂ ನಾಗ ದೇವರಿಗೆ ವಿಶೇಷ ಪೂಜೆ ಸಲ್ಲಿಸಲಾಗುತ್ತದೆ. ಜೀವನ ಸುಖ, ಸಮೃದ್ಧಿ ಹಾಗೂ ಶಾಂತಿಗಾಗಿ ಪ್ರಾರ್ಥನೆಯೊಂದಿಗೆ ನಾಗ ದೇವರಿಗೆ ಹಾಲುಣಿಸುವ ಜತೆಗೆ ಶಿವ ದೇವರಿಗೆ ವಿಶೇಷ ಅಭಿಷೇಕ ಕೈಗೊಳ್ಳಲಾಗುತ್ತದೆ. ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಇಂದು ನಾಗರಪಂಚಮಿ ಹಬ್ಬವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು. ನಾಗಬನ, ನಾಗಕ್ಷೇತ್ರಗಳಿಗೆ ತೆರಳುವ ಮೂಲಕ ಭಕ್ತರು ಶ್ರೀನಾಗರಾಜನಿಗೆ ಎಳನೀರು ಮತ್ತು ಹಾಲಿನ ಅಭಿಷೇಕಗೈದು. ಹಿಂಗಾರ, ಕೇದಗೆ ಹೂವನ್ನು ಸಮರ್ಪಿಸಿ ಸಕಲ ಇಷ್ಟಾರ್ಥಗಳನ್ನು ಈಡೇರಿಸುವಂತೆ ಭಕ್ತಿಯಿಂದ ಪ್ರಾರ್ಥಿಸಿದರು. ಪ್ರಮುಖ ನಾಗಾರಾಧನೆಯ ಕ್ಷೇತ್ರವಾದ ಕುಕ್ಕೆ ಶ್ರೀ ಸುಬ್ರಹ್ಮಣ್ಯ ದೇವಸ್ಥಾನದಲ್ಲಿ ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರು. ಬೆಳಗ್ಗಿನಿಂದಲೇ ಕ್ಷೇತ್ರಕ್ಕೆ ಬರುವವರ ಸಂಖ್ಯೆ ಹೆಚ್ಚಾಗಿತ್ತು. ಮಂಗಳೂರಿನ ಕುಡುಪು ಶ್ರೀ ಅನಂತಪದ್ಮನಾಭ ದೇವಸ್ಥಾನ, ಶರವು ಶ್ರೀ ಮಹಾಗಣಪತಿ ದೇವಸ್ಥಾನ, ಮಂಗಳಾದೇವಿ ದೇವಸ್ಥಾನ ಸೇರಿದಂತೆ ಪ್ರಮುಖ ಕ್ಷೇತ್ರಗಳು ಭಕ್ತರಿಂದ ತುಂಬಿದ್ದವು.

<><*<><>*><>

ಕೇಂದ್ರ ಪ್ರವಾಸೋದ್ಯಮ ಸಚಿವಾಲಯದಿಂದ “ದೆಕೋ ಅಪ್ನ ದೇಶ್, ಪೀಪಲ್ಸ್ ಚಾಯ್ಸ್-೨೦೨೪” ಎಂಬ ಕಾರ್ಯಕ್ರಮ ಪ್ರಾರಂಭಿಸಲಾಗಿದೆ. ಈ ಕಾರ್ಯಕ್ರಮದ ಭಾಗವಾಗಿ ನಾಗರಿಕರು, ಪ್ರವಾಸಿಗರು ಆದ್ಯತೆಯ ಪ್ರವಾಸಿ ತಾಣಗಳನ್ನು ಆಯ್ಕೆ ಮಾಡಲು ಮೈ ಜಿಒವಿ ವೇದಿಕೆಯಡಿ ಆನ್‌ಲೈನ್‌ನಲ್ಲಿ ಅವಕಾಶ ಕಲ್ಪಿಸಿದ್ದು, ತಮ್ಮ ಆಯ್ಕೆಯ ಪ್ರವಾಸಿ ತಾಣಕ್ಕೆ ಮತ ಚಲಾಯಿಸಲು ಸೆಪ್ಟೆಂಬರ್ ೧೫ ರವರೆಗೆ ಕಾಲಾವಕಾಶವಿದೆ. ಪ್ರವಾಸೋದ್ಯಮ ಮೇಲ್ದರ್ಜೆಗೇರಿಸಲು ಈ ಕಾರ್ಯಕ್ರಮ ಪ್ರಾರಂಭಿಸಲಾಗಿದ್ದು, ಸಾರ್ವಜನಿಕರು innovateindia.mygov.in/dekho apna desh ಲಿಂಕ್‌ನಲ್ಲಿ ಲಾಗಿನ್ ಮಾಡಿ ವೋಟ್ ಮಾಡುವಂತೆ ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಅಧ್ಯಕ್ಷ ಹಾಗೂ ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾಹಿತಿ ನೀಡಿದರು.

<><*<><>*><>

ಸಹಕಾರ ಸಂಘದ ಚುನಾವಣೆಗಳಲ್ಲಿ ಯಾರ ಒತ್ತಡಕ್ಕೆ ಯಾವ ರಾಜಕೀಯ ಶಿಫಾರಸ್ಸುಗಳಿಗೆ ಪ್ರಭಾವಿತರಾಗದೆ ಕೆಲಸ ನಿರ್ವಹಿಸುವಂತೆ ಚಿತ್ರದುರ್ಗ ಸಹಕಾರ ಒಕ್ಕೂಟದ ಅಧ್ಯಕ್ಷ ಹೆಚ್.ಎಂ.ದ್ಯಾಮಣ್ಣ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಸಹಕಾರ ಇಲಾಖೆ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳು ಜಂಟಿಯಾಗಿ ಆಯೋಜಿಸಿದ್ದ ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮ ಮಾತನಾಡಿದ ಅವರು, ಎಲ್ಲ ವರ್ಗದ ಜನರಿಗೆ ನ್ಯಾಯ ಒದಗಿಸುವುದು ತಮ್ಮ ಜವಾಬ್ದಾರಿಯಾಗಿದೆ ಎಂದರು.

<><*<><>*><>

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿರುವ ಎಲ್ಲ ಪೇಯಿಂಗ್ ಗೆಸ್ಟ್- ಪಿಜಿಗಳಿಗೆ ಬಿಬಿಎಂಪಿ ನೂತನ ಮಾರ್ಗಸೂಚಿ ಬಿಡುಗಡೆಗೊಳಿಸಿದೆ. ಪಿಜಿಗಳಲ್ಲಿ ಎಲ್ಲ ಪ್ರವೇಶ, ನಿರ್ಗಮನ ದ್ವಾರ ಹಾಗೂ ಆವರಣದ ಸುತ್ತಮುತ್ತಲೂ ಸಿಸಿ ಟಿವಿ ಕ್ಯಾಮೆರಾ ಅಳವಡಿಸುವುದನ್ನು ಕಡ್ಡಾಯಗೊಳಿಸಲಾಗಿದ್ದು, ಎಲ್ಲಾ ಘಟನಾವಳಿಗಳನ್ನು ೯೦ ದಿನಗಳವರೆಗೆ ಸಂರಕ್ಷಿಸಬೇಕು ಎಂದು ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ-೨೦೨೦ ರ ಕಾಯ್ದೆಯಡಿ ಮಾರ್ಗಸೂಚಿಯನ್ನು ಕಡ್ಡಾಯವಾಗಿ ಪಾಲಿಸುವಂತೆ ಸೂಚಿಸಿರುವ ಬಿಬಿಎಂಪಿ, ಎಲ್ಲಾ ಪಿಜಿಗಳು ಪಾಲಿಕೆಯಿಂದ ಪರವಾನಗಿ ಪತ್ರ ಪಡೆಯುವ ಮುನ್ನ ಅಗ್ನಿ ಸುರಕ್ಷಿತಾ ಕ್ರಮಗಳನ್ನು ಖಚಿತಪಡಿಸಿ, ಸಕ್ಷಮ ಪ್ರಾಧಿಕಾರದಿಂದ ಅಧಿಕೃತ ಪ್ರಮಾಣಪತ್ರವನ್ನು ಪಡೆದುಕೊಂಡಿರಬೇಕು ಮತ್ತು ಕನಿಷ್ಠ ಒಬ್ಬ ಸುರಕ್ಷತಾ ಸಿಬ್ಬಂದಿಯನ್ನು ದಿನದ ೨೪ ಗಂಟೆಯೂ ಸೇವೆಗೆ ನಿಯೋಜಿಸಿರಬೇಕು. ಹಾಗೆಯೇ ಸ್ವಚ್ಛತೆಯನ್ನು ಕಾಪಾಡುವ ಜೊತೆಗೆ ಅಗತ್ಯವಿರುವ ಪ್ರಥಮ ಚಿಕಿತ್ಸಾ ಪೆಟ್ಟಿಗೆ, ಶುದ್ಧ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ, ಸೇರಿದಂತೆ ಇತರ ಅಗತ್ಯ ಸೌಲಭ್ಯಗಳನ್ನು ಒದಗಿಸುವುದು ಕಡ್ಡಾಯವಾಗಿದೆ ಮಾರ್ಗಸೂಚಿಯಲ್ಲಿ ತಿಳಿಸಲಾಗಿದೆ.

<><*<><>*><>

ಯಾದಗಿರಿ ನಗರ ಠಾಣೆ ಪಿಎಸ್‌ಐ ಪರಶುರಾಮ್ ಸಾವಿನ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಐಡಿ ತಂಡ, ನಗರದ ಡಿವೈಎಸ್‌ಪಿ ಕಚೇರಿಗೆ ಆಗಮಿಸಿ ಪರಶುರಾಮ್ ಅವರ ತಂದೆ ಜನಕಮುನಿ, ಸಹೋದರ ಹಣಮಂತ, ಮಾವ ವೆಂಕಟಸ್ವಾಮಿ ಅವರಿಂದ ಹೇಳಿಕೆ ಪಡೆಯಿತು. ಬಳಿಕ ಪೊಲೀಸ್ ಇಲಾಖೆಯ ವಸತಿ ಗೃಹದಲ್ಲಿರುವ ಮೃತ ಪರಶುರಾಮ್ ಅವರ ಮನೆಗೆ ತೆರಳಿ, ಸ್ಥಳ ಮಹಜರು ನಡೆಸಿದರು. ಬಳಿಕ ಕುಟುಂಬಸ್ಥರಿಂದ ಸಿಐಡಿ ತನಿಖಾಧಿಕಾರಿಗಳು ಮಾಹಿತಿ ಪಡೆದರು.

<><*<><>*><>

ಚಿಕ್ಕಮಗಳೂರು ನಗರಸಭೆ ವತಿಯಿಂದ ಕಂದಾಯ ವಸೂಲಾತಿಯನ್ನು ಡಿಜಿಟಲೀಕರಣಗೊಳಿಸಲಾಗಿದ್ದು, ಆನ್‌ಲೈನ್ ಮೂಲಕ ಕಂದಾಯ ಪಾವತಿಗೆ ಅವಕಾಶ ಕಲ್ಪಿಸಿಕೊಡಲಾಗಿದೆ ಎಂದು ನಗಸಭೆ ಪೌರಾಯುಕ್ತ ಬಿ.ಸಿ.ಬಸವರಾಜ್ ತಿಳಿಸಿದ್ದಾರೆ. ನಗರಸಭೆ ಸಭಾಂಗಣದಲ್ಲಿಂದು ಕಂದಾಯ ವಸೂಲಾತಿ ಸಿಬ್ಬಂದಿಗಳಿಗೆ ಡಿಜಿಟಲ್ ಪೇಮೆಂಟ್ ಯಂತ್ರಗಳನ್ನು ವಿತರಿಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿಯೆ ಮೊಟ್ಟ ಮೊದಲ ಬಾರಿಗೆ ಈ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ. ಜನರು ತಮ್ಮ ಗೂಗಲ್ ಪೇ, ಪೋನ್ ಪೇ ಮುಖಾಂತರ ಆನ್ ಲೈನ್ ಪೇಮೆಂಟ್ ಮಾಡಬಹುದು ಎಂದು ತಿಳಿಸಿದರು.

<><*<><>*><>

ಕೋಲಾರ ನಗರ ಹೊರವಲಯದ ಹೊನ್ನೇನಹಳ್ಳಿಯ ಕೆನರಾ ಬ್ಯಾಂಕ್ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನಿರುದ್ಯೋಗಿ ಯುವಕ-ಯುವತಿಯರಿಗಾಗಿ ಉಚಿತ ವೈಜ್ಞಾನಿಕ ಕೋಳಿ ಸಾಕಾಣಿಕೆ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ರಾಜ್ಯ ಕೃಷಿ ಸಚಿವ ಚೆಲುವರಾಯಸ್ವಾಮಿ ಇದೇ ೧೨ ರಂದು ಚಿಕ್ಕಬಳ್ಳಾಪುರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಕೃಷಿ ಇಲಾಖೆಯ ಬೆಂಗಳೂರು ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆ ನಡೆಸಲಿದ್ದಾರೆ. ಸಭೆಯ ನಂತರ ಸಚಿವರು ಚಿಕ್ಕಬಳ್ಳಾಪುರ ತಾಲ್ಲೂಕಿನ ಬನ್ನಿಕುಪ್ಪೆ ಮತ್ತು ಯಲುವಹಳ್ಳಿ ಕೃಷಿ ಕ್ಷೇತ್ರಗಳಿಗೆ ಭೇಟಿ ನೀಡಲಿದ್ದಾರೆ.

೨. ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಗರ್ಭಿಣಿ, ಬಾಣಂತಿಯರಿಗೆ ಸ್ತನ್ಯಪಾನದ ಮಹತ್ವದ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಗದಗನಲ್ಲಿ ಜರುಗಿತು.

<><*<><>*><>

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಇಂದು ಕುಸ್ತಿಯಲ್ಲಿ, ಅಮನ್ ಸೆಹ್ರಾವತ್ ಪುರುಷರ ೫೭ ಕೆಜಿ ಫ್ರೀಸ್ಟೈಲ್ ವಿಭಾಗದ ಕಂಚು ಪದಕ ಪಂದ್ಯದಲ್ಲಿ ಸ್ಪರ್ಧಿಸುತ್ತಿದ್ದಾರೆ. ಭಾರತೀಯ ಕಾಲಮಾನ ರಾತ್ರಿ ೧೦.೪೫ ಕ್ಕೆ ನಡೆಯುವ ಪಂದ್ಯದಲ್ಲಿ ಅವರು, ಪುಯೆರ್ತೊ ರೀಕೊದ ಡೆರಿಯನ್ ಕ್ರೂಸ್ ಅವರನ್ನು ಎದುರಿಸಲಿದ್ದಾರೆ. ಅಥ್ಲೆಟಿಕ್ಸ್‌ನಲ್ಲಿ, ಪುರುಷರ ೪x೪೦೦ ಮೀಟರ್ ರಿಲೇಯಲ್ಲಿ ಭಾರತ ತಂಡ ನಾಲ್ಕನೇ ಸ್ಥಾನ ಹಾಗೂ ಮಹಿಳೆಯರ ೪x೪೦೦ ಮೀಟರ್ ರಿಲೇಯಲ್ಲಿ ಭಾರತೀಯ ತಂಡ ೮ ಸ್ಥಾನಗಳಿಸುವುದರೊಂದಿಗೆ ಸ್ಪರ್ಧೆಯಿಂದ ಹೊರಬಿದ್ದಿವೆ.

<><*<><>*><>

ಇನ್ನು ಹವಾವಾರ್ತಾಮಾನ...

ರಾಜ್ಯದಲ್ಲಿಂದು ನೈಋತ್ಯ ಮುಂಗಾರು ಸಾಮಾನ್ಯವಾಗಿತ್ತು. ಕರಾವಳಿ ಒಂದೆರಡು ಕಡೆಗಳಲ್ಲಿ ಮತ್ತು ಒಳನಾಡಿನ ಹಲವು ಸ್ಥಳಗಳಲ್ಲಿ ಮಳೆಯಾಗಿದೆ.

ಪ್ರಮುಖವಾಗಿ ಉತ್ತರಕನ್ನಡ ಜಿಲ್ಲೆ ಗೋಕರ್ಣದಲ್ಲಿ ೧೦ ಸೆಂಟಿಮೀಟರ್ ಮಳೆಯಾಗಿದೆ. ಉಳಿದಂತೆ ಮಂಕಿ ೬, ಕೋಟಾ, ಕುಮಟಾ, ಮಂಗಳೂರಿನಲ್ಲಿ ತಲಾ ೫, ಧರ್ಮಸ್ಥಳ, ಉಡುಪಿ, ಪಣಂಬೂರು, ಕಾರ್ಕಳ, ಮುನಿರಾಬಾದ್, ಮದುಗಿರಿಯಲ್ಲಿ ತಲಾ ೪ ಸೆಂಟಿಮೀಟರ್ ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>